



ಅರುಣ ಪಿ. ಭಟ್ಟ

## ವಾರಭವಿಷ್ಯ: 21.12.2023ರಿಂದ 27.12.2023ರವರೆಗೆ




ವಾರದ ಶುರುವಿನಲ್ಲಿ ವ್ಯಾಪಾರ ನಡೆಸುತ್ತಿರುವವರಿಗೆ ಲಾಭವಿದೆ. ಹೊಸ ಉತ್ಸಾಹ ನಿಮ್ಮಲ್ಲಿ ಕಾಣಿಸಿಕೊಳ್ಳಲಿದೆ. ವಾರದ ಮಧ್ಯಭಾಗದಲ್ಲಿ ಜೀವನ ಮಟ್ಟದ ಸುಧಾರಣೆ ಬಗ್ಗೆ ಹೆಚ್ಚಿನ ಗಮನ ನೀಡಲಿದ್ದೀರಿ. ನಿಮ್ಮ ಸಂತೋಷದ ಕ್ಷಣಗಳಲ್ಲಿ ಕೆಲ ಅಡೆತಡೆಗಳು ಎದುರಾದಂತೆ ಅನಿಸುತ್ತವೆ. ಆರೋಗ್ಯವನ್ನು ಉತ್ತಮವಾಗಿ ಕಾಪಾಡಿಕೊಳ್ಳಲಿದ್ದೀರಿ. ಶುಭದಿನ 25. ಹನುಮಾನ್ ಚಾಲೀಸ್ ಪಠಿಸಿರಿ.




ಉದ್ಯೋಗ ಮತ್ತು ಸಂಘಟನೆಗೆ ಸಂಬಂಧಿಸಿದಂತೆ ಉತ್ತಮವಾದ ಪ್ರಗತಿ ಇದೆ. ಉದ್ಯೋಗ ಸ್ಥಳದಲ್ಲಿ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ನಂಬಿದ ವ್ಯಕ್ತಿಗಳು ವಿವಿಧ ವಿಚಾರಗಳಲ್ಲಿ ಸುಳ್ಳು ಹೇಳಿದ್ದಾರೆ ಎಂಬ ಸಂಗತಿ ನಿಮಗೆ ತಿಳಿದು ಬೇಸರವಾಗುತ್ತದೆ. ನಿಮ್ಮ ವಿಚಾರಗಳನ್ನು ನೇರವಾಗಿ ಹೇಳಿಕೊಳ್ಳಲಿದ್ದೀರಿ. ನಿಮ್ಮ ಕೆಲಸಗಳ ಬಗ್ಗೆ ಉತ್ತಮ ಸ್ಪಂದನೆ ದೊರೆಯುತ್ತದೆ. ಶುಭದಿನ 22. ಗಣೇಶ ಪಂಚರತ್ನ ಪಠಿಸಿರಿ.




ವಾರದ ಆರಂಭದಲ್ಲಿ ವೃತ್ತಿ ಬದುಕಿನಲ್ಲಿ ಬೆಳವಣಿಗೆಗೆ ಅದ್ಭುತ ಅವಕಾಶಗಳಿವೆ. ಪರಿಶ್ರಮಕ್ಕೆ ಪ್ರತಿಫಲ ದೊರೆಯಲಿದೆ. ಹಣಕಾಸು ಪರಿಸ್ಥಿತಿ ಉತ್ತಮಪಡಿಸಿಕೊಳ್ಳುವ ಅವಕಾಶ ನಿಚ್ಚಳವಾಗಿ ಗೋಚರಿಸುತ್ತದೆ. ವಾರದ ಮಧ್ಯ ಭಾಗದಲ್ಲಿ ಬಹಳ ಕಾಲದಿಂದ ಕಾಣುತ್ತಿದ್ದ ಕನಸನ್ನು ಸಾಕಾರ ಮಾಡಿಕೊಳ್ಳಲು ಪ್ರಯತ್ನಿಸುತ್ತೀರಿ. ಖರ್ಚಿನ ಪ್ರಮಾಣ ಹೆಚ್ಚಿರುತ್ತದೆ. ಶುಭದಿನ 25. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಉದ್ಯೋಗಸ್ಥರಿಗೆ ವಾರದ ಶುರುವಿನಲ್ಲಿ ಅನುಕೂಲವಿದೆ. ಸೇವಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವವರಿಗೆ ಹಾಗೂ ವ್ಯಾಪಾರ ವಲಯದಲ್ಲಿ ತೊಡಗಿರುವವರಿಗೆ ಉತ್ತಮ ಅನುಕೂಲವಿದೆ. ಬಡ್ತಿ ಆಗುವ ಸಾಧ್ಯತೆ ಇದೆ. ವೈಯಕ್ತಿಕ ಸಂಬಂಧದಲ್ಲಿ ಬೇಸರವಾಗಲಿದೆ. ಆರೋಗ್ಯಕ್ಕೆ ಸಂಬಂಧಿಸಿದಂತೆ ಅನುಕೂಲಕರ ಸಮಯ ಇದು. ಹಣಕಾಸು ವಿಚಾರದಲ್ಲಿ ಪ್ರಗತಿ ಇಲ್ಲ. ಶುಭದಿನ 27. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಉದ್ಯೋಗ ಸ್ಥಳದಲ್ಲಿ ಪ್ರಗತಿಗಾಗಿ ಭಾರೀ ಶ್ರಮ ಹಾಕಲಿದ್ದೀರಿ. ಕೆಲವು ಕಾನೂನು ತೊಡಕುಗಳನ್ನು ಎದುರಿಸಬೇಕಾಗುತ್ತದೆ. ಆರೋಗ್ಯದ ವಿಚಾರಕ್ಕೆ ಇದು ಉತ್ತಮ ಸಮಯ ಅಲ್ಲ. ಇದರಿಂದ ಚಿಂತೆ ಹೆಚ್ಚಾಗಲಿದೆ. ದೂರದ ಪ್ರಯಾಣ ಮಾಡಲು ನಿರ್ಧಾರ ಮಾಡುತ್ತೀರಿ. ಇದು ಲಾಭದಾಯಕವಾಗಿ ಪರಿಣಮಿಸಲಿದೆ. ಹಿರಿಯ ವ್ಯಕ್ತಿಯಿಂದ ನಿಮಗೆ ನೆರವು ದೊರೆಯಲಿದೆ. ಶುಭದಿನ 26. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಶ್ರಮಕ್ಕೆ ಅದ್ಭುತವಾದ ಅನುಕೂಲಗಳು ದೊರೆಯಲಿವೆ. ಪೋಷಕರ ಜೊತೆಗೆ ಸಮಯ ಕಳೆಯಲು ಸಾಧ್ಯವಾಗದೆ ಕೆಲವು ಸಮಸ್ಯೆಗಳು ತಲೆದೋರಲಿವೆ. ಉದ್ಯೋಗ ಬದಲಾವಣೆಗೆ ಯತ್ನಿಸುತ್ತಿರುವವರು ಇನ್ನೂ ಹೆಚ್ಚಿನ ಶ್ರಮ ಹಾಕಬೇಕು. ವಾರದ ದ್ವಿತೀಯಾರ್ಧದಲ್ಲಿ ವ್ಯಾಪಾರ ವ್ಯವಹಾರದಲ್ಲಿ ಉತ್ತಮ ಲಾಭ ಇದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರಗತಿ ಇದೆ. ಶುಭದಿನ 22. ಸೌಂದರ್ಯ ಲಹರಿ ಪಠಿಸಿರಿ.




ನೀವು ಹಾಕಿದ ಶ್ರಮಕ್ಕೆ ಯಶಸ್ಸು ಸಿಗಲಿದೆ. ಉದ್ಯೋಗದಲ್ಲಿ ಯಶಸ್ಸು ದೊರೆಯಲಿದೆ. ಆ ಮೂಲಕ ನಿಮ್ಮ ಕನಸನ್ನು ಈಡೇರಿಸಿಕೊಳ್ಳಲಿದ್ದೀರಿ. ವಾರದ ಮಧ್ಯ ಭಾಗದ ಹೊತ್ತಿಗೆ ಕೆಲವು ಕೆಲಸಗಳನ್ನು ಪೂರ್ಣಗೊಳಿಸುವುದಕ್ಕೆ ವಿಪರೀತ ಶ್ರಮ ಹಾಕಬೇಕಾಗುತ್ತದೆ. ವಾರದ ದ್ವಿತೀಯಾರ್ಧದಲ್ಲಿ ಅಂದುಕೊಳ್ಳದ ರೀತಿಯಲ್ಲಿ ನಾನಾ ಕಡೆಯಿಂದ ಸಮಸ್ಯೆಗಳು ಎದುರಾಗುತ್ತವೆ. ಶುಭದಿನ 24. ಲಿಂಗಾಷ್ಟಕ ಪಠಿಸಿರಿ.




ಹೆಚ್ಚುವರಿ ಆದಾಯ ಆಗದೆ ಬೇಸರಕ್ಕೆ ಗುರಿಯಾಗುತ್ತೀರಿ. ಈ ವಿಚಾರದಲ್ಲಿ ನಿಮ್ಮ ವಿವೇಚನೆಯನ್ನು ಸರಿಯಾದ ರೀತಿಯಲ್ಲಿ ಬಳಸಿ. ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು ಸರಿಯಾದ ಚಿಕಿತ್ಸೆಯನ್ನು ಪಡೆಯುವುದು ಉತ್ತಮ. ವಾರದ ಅಂತ್ಯದಲ್ಲಿ ಹಣಕಾಸು ವಿಚಾರದಲ್ಲಿ ಮತ್ತೆ ಹಳೆ ಲಯಕ್ಕೆ ಮರಳುತ್ತೀರಿ. ವ್ಯಾಪಾರದಲ್ಲಿ ಉತ್ತಮ ಲಾಭದ ಸಾಧ್ಯತೆಯಿದೆ. ಶುಭದಿನ 22. ಚಂಡಿ ಪಾರಾಯಣ ಮಾಡಿರಿ.




ಶೈಕ್ಷಣಿಕ ರಂಗದಲ್ಲಿ ಅದ್ಭುತವಾದ ಪ್ರಗತಿ ಇದೆ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ, ಸಂದರ್ಶನಗಳಲ್ಲಿ ಯಶಸ್ಸು ನಿಮ್ಮದಾಗಲಿದೆ. ಸಂಗಾತಿ ಜೊತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ಹಣಕಾಸು ವಿಚಾರದಲ್ಲಿ ನಿರೀಕ್ಷಿತವಾದ ಪ್ರಗತಿ ಆಗಲಿದೆ. ಕೆಲವರಿಗೆ ಖರ್ಚಿನಲ್ಲಿ ಅನಿರೀಕ್ಷಿತವಾದ ಹೆಚ್ಚಳ ಆಗಬಹುದು. ಹೀಗೆ ಆಗುವುದರಿಂದ ಸಮಸ್ಯೆಗಳು ಎದುರಾಗಲಿವೆ. ಶುಭದಿನ 25. ದತ್ತ ಗುರುಚರಿತ್ರೆ ಪಠಿಸಿರಿ.




ಉದ್ಯೋಗದಲ್ಲಿ ಯಶಸ್ಸು ದೊರೆಯುವ ಅವಕಾಶಗಳಿವೆ. ಸಂಸ್ಥೆಯೊಂದರ ಜೊತೆಗೆ ದೀರ್ಘಾವಧಿ ಒಪ್ಪಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಇನ್ನು ವ್ಯಾಪಾರ ಉದ್ಯಮವನ್ನು ವಿಸ್ತರಿಸಲು ವಿಶಿಷ್ಟ ಅವಕಾಶಗಳು ದೊರೆಯಬಹುದು. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಉತ್ತಮವಾದ ಪ್ರಗತಿ ಇದೆ. ವೈಯಕ್ತಿಕ ಸಂಬಂಧದಲ್ಲಿ ಭಿನ್ನಾಭಿಪ್ರಾಯಗಳು ಇದ್ದಲ್ಲಿ ನಿವಾರಿಸಿಕೊಳ್ಳಲು ಸೂಕ್ತ ಸಮಯ. ಶುಭದಿನ 21. ನವಗ್ರಹ ಆರಾಧನೆ ಮಾಡಿರಿ.




ವಾರದ ಶುರುವಿನಲ್ಲಿ ವರ್ಚಸ್ಸು ವೃದ್ಧಿಯಾಗಲಿದೆ. ವೃತ್ತಿ ಕ್ಷೇತ್ರದಲ್ಲಿ ಉತ್ತಮ ಪ್ರಗತಿ ಇದೆ. ವೈದ್ಯಕೀಯ ಕ್ಷೇತ್ರದಲ್ಲಿ ಇರುವವರಿಗೆ ಪದೋನ್ನತಿ ದೊರೆಯಬಹುದು. ಕೌಟುಂಬಿಕ ಹಾಗೂ ಸಂಬಂಧದೊಳಗೆ ಸಮಸ್ಯೆಗಳು ಹೆಚ್ಚಾಗಲಿವೆ. ಸೋದರ ಸೋದರಿಯರ ಬಾಂಧವ್ಯ ಗಟ್ಟಿಯಾಗಲಿದೆ. ಉದ್ಯೋಗಸ್ಥರಿಗೆ ಉದ್ಯೋಗ ಸ್ಥಳದಲ್ಲಿ ನಾನಾ ಬಗೆಯಲ್ಲಿ ಅನುಕೂಲಗಳಿವೆ. ಶುಭದಿನ 22. ವಿಷ್ಣು ಸಹಸ್ರನಾಮ ಮಾಡಿರಿ.




ವಾರದ ಶುರುವಿನಲ್ಲಿ ಭೂಮಿ ಖರೀದಿಯಲ್ಲಿ ತೊಡಗುವ ಸಾಧ್ಯತೆ ಇದೆ. ಬಹಳ ಕಾಲದಿಂದ ಅಂದುಕೊಂಡ ಕೆಲಸಗಳಲ್ಲಿ ಪ್ರಗತಿಯಾಗಲಿದೆ. ಉದ್ಯೋಗ ವಿಚಾರವಾಗಿ ದೂರಪ್ರಯಾಣ ಮಾಡಬೇಕಾಗುತ್ತದೆ. ಇದರಿಂದ ಮಾನಸಿಕವಾಗಿ ಚಿಂತೆಗೆ ಗುರಿಯಾಗುತ್ತೀರಿ. ಈ ಅವಧಿಯಲ್ಲಿ ಆರೋಗ್ಯದಲ್ಲಿ ಸಮಸ್ಯೆ ಎದುರಾಗಬಹುದು. ಉದ್ಯೋಗದಲ್ಲಿ ಅದ್ಭುತವಾದ ಪ್ರಗತಿ ಇದೆ. ಶುಭದಿನ 26. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.